**ಕರ್ನಾಟಕ ಸರ್ಕಾರ**
**ಮಕ್ಕಳ ರಕ್ಷಣಾ ನಿರ್ದೇಶನಾಲಯ**
**ವಿಶ್ವೇಶ್ವರಯ್ಯ ಕೇಂದ್ರ, ಚಿಕ್ಕಗೋಪುರ, 3ನೇ ಮಹಡಿ, ಡಾ: ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು – 560001**

**E-mail ID:icps.kar@gmail.com** **Ph.NO: 080-22867383**

ಸಂ:ಮರನಿ/ಮರ /ಜಿ.ತ.ಸ /58/2024-25 ದಿನಾಂಕ: 03-10-2024

ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು,
ಜಿಲ್ಲಾ ಮಕ್ಕಳ ರಕ್ಷಣಾ ಘಟಕ
ಎಲ್ಲಾ ಜಿಲ್ಲೆಗಳು.

ಮಾನ್ಯರೇ,

**ವಿಷಯ:** ಜಿಲ್ಲಾ ತನಿಖಾ ಸಮಿತಿ ಕಾರ್ಯನಿರ್ವಹಣೆ ಕುರಿತು.

**********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ 2015 ತಿದ್ದುಪಡಿ 2021, ಮಾದರಿ ನಿಯಮಗಳು, 2016 ತಿದ್ದುಪಡಿ 2022 ಅನ್ನು ಕರ್ನಾಟಕ ರಾಜ್ಯಾದ್ಯಂತ ಅನುಷ್ಠಾನಗೊಳಿಸಲಾಗುತ್ತಿದೆ. ಕರ್ನಾಟಕ ರಾಜ್ಯದಲ್ಲಿ ಮಕ್ಕಳ ಪಾಲನಾ ಸಂಸ್ಥೆಗಳು ಬಾಲನ್ಯಾಯ ಕಾಯ್ದೆಯನ್ವಯ ಮಿಷನ್ ವಾತ್ಸಲ್ಯ ಯೋಜನೆಯಡಿ ಕಾರ್ಯ ನಿರ್ವಹಿಸುತ್ತಿವೆ. ಸಂಕಷ್ಟ ಪರಿಸ್ಥಿತಿಯಲ್ಲಿರುವ ಮಕ್ಕಳ ಪಾಲನೆ, ಸಂರಕ್ಷಣೆ ಹಾಗೂ ಪುನರ್ವಸತಿ ಕಲ್ಪಿಸುವುದು ಇಲಾಖೆಯ ಮುಖ್ಯ ಉದ್ದೇಶವಾಗಿರುತ್ತದೆ.

ಪಾಲನೆ ಮತ್ತು ರಕ್ಷಣೆ ಅಗತ್ಯವಿರುವ ಮಕ್ಕಳನ್ನು ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರು ಪಡಿಸಿ, ಇಲಾಖಾ ವ್ಯಾಪ್ತಿಯಲ್ಲಿನ ಬಾಲ ಮಂದಿರಗಳಿಗೆ ದಾಖಲಿಸಲಾಗುವುದು. ಕಾನೂನಿನೊಂದಿಗೆ ಸಂಘರ್ಷಕ್ಕೊಳಗಾದ ಮಕ್ಕಳನ್ನು ಬಾಲನ್ಯಾಯ ಮಂಡಳಿಗಳ ಮುಂದೆ ಹಾಜರು ಪಡಿಸಿ ಇಲಾಖಾ ವ್ಯಾಪ್ತಿಯಲ್ಲಿನ ವೀಕ್ಷಣಾಲಯಗಳಿಗೆ ದಾಖಲಿಸಲಾಗುತ್ತಿದೆ.

ಮುಂದುವರೆದಂತೆ, ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಮಾದರಿ ನಿಯಮಗಳು, 2016 ತಿದ್ದುಪಡಿ 2022ರ ನಿಯಮ 41(1) ಮತ್ತು (8) ರಲ್ಲಿ ಜಿಲ್ಲಾ ಮಟ್ಟದ ತನಿಖಾ ಸಮಿತಿಯನ್ನು ಈ ಕೆಳಕಂಡಂತೆ ರಚಿಸಲು ನಿರ್ದೇಶಿಸಲಾಗಿರುತ್ತದೆ.

| ಕ್ರ. ಸಂ | ಪದನಾಮ | ವಿವರ |
|---|---|---|
| 1 | ಅಪರ ಜಿಲ್ಲಾಧಿಕಾರಿಗಳು | ಅಧ್ಯಕ್ಷರು |
| 2 | ಮಂಡಳಿಯ ಅಥವಾ ಸಮಿತಿಯ ಸದಸ್ಯರು | ಸದಸ್ಯರು |
| 3 | ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು | ಸದಸ್ಯ ಕಾರ್ಯದರ್ಶಿ |
| 4 | ಮುಖ್ಯ ಅಥವಾ ಜಿಲ್ಲಾ ಆರೋಗ್ಯಾಧಿಕಾರಿಗಳಿಂದ ನಾಮ ನಿರ್ದೇಶಿಸಲ್ಪಟ್ಟ ಓರ್ವ ವೈದ್ಯಾಧಿಕಾರಿ + | ಸದಸ್ಯರು |
| 5 | ಮಕ್ಕಳ ಹಕ್ಕುಗಳು, ಆರೈಕೆ ಸಂರಕ್ಷಣೆ ಮತ್ತು ಕಲ್ಯಾಣ ಕ್ಷೇತ್ರದಲ್ಲಿ ಕೆಲಸ ಮಾಡುವ ನಾಗರಿಕ ಸಮಾಜದ ಒಬ್ಬ ಸದಸ್ಯರು, ಯಾವುದೇ ಸಂಸ್ಥೆಯ ನಿರ್ವಹಣೆ ಭಾಗವಾಗಿಲ್ಲದಿರುವುದು ಅಥವಾ ಯಾವುದೇ ಮಕ್ಕಳ ಆರೈಕೆ ಸಂಸ್ಥೆಯ ಸಂಘಟನೆಯಲ್ಲಿ ಯಾವುದೇ ಸಂಭಾವನೆಯಲ್ಲಿ ಆಸಕ್ತಿ ಇಲ್ಲದವರು. | ಸದಸ್ಯರು |
| 6 | ಓರ್ವ ನುರಿತ ಮಾನಸಿಕ ಆರೋಗ್ಯ ತಜ್ಞರು - ಮಕ್ಕಳೊಂದಿಗೆ ಕಾರ್ಯ ನಿರ್ವಹಿಸಿದ ಅನುಭವವುಳ್ಳವರು | ಸದಸ್ಯರು |

| | | |
|---|---|---|
| 7 | ತನಿಖಾ ಸಮಿತಿಯ ಕರ್ತವ್ಯ ನಿರ್ವಹಣೆಯಲ್ಲಿ ಯಾವುದೇ ವೈಯಕ್ತಿಕ ಹಿತಾಸಕ್ತಿಗಳ ಸಂಘರ್ಷ ಉಂಟಾಗದಂತೆ, ಜಿಲ್ಲಾಧಿಕಾರಿಗಳಿಂದ ಸೂಕ್ತವೆಂದು ಪರಿಗಣಿಸಲ್ಪಟ್ಟ ಸಮಾಜದ ಓರ್ವ ಗಣ್ಯ ವ್ಯಕ್ತಿ. | ಸದಸ್ಯರು |

ಸದರಿ ನಿಯಮಗಳಲ್ಲಿ ಜಿಲ್ಲಾ ತನಿಖಾ ಸಮಿತಿಯು ಈ ಕೆಳಕಂಡ ಕಾರ್ಯ ಚಟುವಟಿಕೆ/ ಜವಾಬ್ದಾರಿಗಳನ್ನು ನಿರ್ವಹಿಸಲು ನಿರ್ದೇಶಿಸಲಾಗಿರುತ್ತದೆ.

1. ಜಿಲ್ಲಾ ತನಿಖಾ ಸಮಿತಿಯು ಜಿಲ್ಲೆಯಲ್ಲಿನ ಮಕ್ಕಳ ಪಾಲನಾ ಸಂಸ್ಥೆಗಳಿಗೆ ಭೇಟಿ ನೀಡಿ ನಮೂನೆ 46 ರಲ್ಲಿ ವರದಿ ಸಲ್ಲಿಸುವುದು.
2. ಖಾಸಗಿ ಮತ್ತು ಸರ್ಕಾರಿ ಪಾಲನಾ ಸಂಸ್ಥೆಗಳನ್ನು ಒಳಗೊಂಡಂತೆ, ಪ್ರವಾಸದ ವೇಳಾಪಟ್ಟಿಯನ್ನು ಯೋಜಿಸಿ ಗರಿಷ್ಠ 3 ತಿಂಗಳಲ್ಲಿ ಜಿಲ್ಲೆಯ ಎಲ್ಲಾ ಮಕ್ಕಳ ಪಾಲನಾ ಸಂಸ್ಥೆಗಳ ಪರಿಶೀಲನೆ ನಡೆಸುವುದು.
3. ಜಿಲ್ಲಾ ತನಿಖಾ ಸಮಿತಿಯು ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ 2015 ತಿದ್ದುಪಡಿ 2021, ಮಾದರಿ ನಿಯಮಗಳು, 2016 ತಿದ್ದುಪಡಿ 2022 ರನ್ವಯ ಮಕ್ಕಳ ಪಾಲನಾ ಸಂಸ್ಥೆಗಳಿಗೆ ಭೇಟಿ ನೀಡಿದ ಸಮಯದಲ್ಲಿ ಗಮನಿಸಿದ ಅಂಶಗಳು ಹಾಗೂ ಅದನ್ನು ಉತ್ತಮಪಡಿಸಲು ಸಲಹೆಗಳನ್ನು ಜಿಲ್ಲಾಧಿಕಾರಿಗಳಿಗೆ ಮತ್ತು ನಿರ್ದೇಶನಾಲಯಕ್ಕೆ ವರದಿ ಮಾಡುವುದು.
4. ಜಿಲ್ಲಾ ತನಿಖಾ ಸಮಿತಿಯು ಮಕ್ಕಳ ಪಾಲನಾ ಸಂಸ್ಥೆಗಳಿಗೆ ಭೇಟಿ ನೀಡಿದ ಸಮಯದಲ್ಲಿ ಮಕ್ಕಳೊಂದಿಗೆ ಅವರ ಯೋಗ ಕ್ಷೇಮದ ಬಗ್ಗೆ ಸಂವಹನ ನಡೆಸಿ ಅವರ ಪ್ರತಿಕ್ರಿಯೆಯನ್ನು ನಮೂದಿಸುವುದು.
5. ಜಿಲ್ಲಾ ತನಿಖಾ ಸಮಿತಿಯು ಸಲ್ಲಿಸಿದ ವರದಿಗೆ ಜಿಲ್ಲಾಧಿಕಾರಿಗಳು ಅಗತ್ಯ ಕ್ರಮವನ್ನು ಕೈಗೊಳ್ಳುವುದು ಹಾಗೂ ನಿಗದಿತ ಕಾಲಾವಧಿಯೊಳಗೆ ಸುಧಾರಣಾ ಕ್ರಮಗಳನ್ನು ಅನುಸರಿಸಿರುವ ಕುರಿತು ಖಾತ್ರಿ ಪಡಿಸಿಕೊಳ್ಳುವುದು.
6. ಜಿಲ್ಲಾಧಿಕಾರಿಗಳು ಜಿಲ್ಲಾ ವ್ಯಾಪ್ತಿಯಲ್ಲಿನ ಮಕ್ಕಳ ಪಾಲನಾ ಸಂಸ್ಥೆಗಳ ಕಾರ್ಯ ನಿರ್ವಹಣೆ ಹಾಗೂ ಸುಧಾರಣೆಗೆ ತೆಗೆದುಕೊಂಡಿರುವ ಕ್ರಮದ ಕುರಿತು ವರದಿಯನ್ನು ರಾಜ್ಯ ಸರ್ಕಾರಕ್ಕೆ ಪ್ರತಿ ವರ್ಷವೂ ಸಲ್ಲಿಸುವುದು.

ಈ ಮೇಲೆ ತಿಳಿಸಿರುವಂತೆ ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ 2015 ತಿದ್ದುಪಡಿ 2021, ಮಾದರಿ ನಿಯಮಗಳು, 2016 ತಿದ್ದುಪಡಿ 2022 ರನ್ವಯ ಜಿಲ್ಲಾ ವ್ಯಾಪ್ತಿಯಲ್ಲಿ ಕಡ್ಡಾಯವಾಗಿ ಜಿಲ್ಲಾ ತನಿಖಾ ಸಮಿತಿಯನ್ನು ರಚಿಸಿ, ಸಮಿತಿಯ ಕಾರ್ಯ ಚಟುವಟಿಕೆ/ ಜವಾಬ್ದಾರಿಗಳನ್ನು ತಪ್ಪದೇ ಕಡ್ಡಾಯವಾಗಿ ಪಾಲಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ಮತ್ತು ಸೂಚನೆಗಳನ್ನು ನೀಡಬೇಕಾಗಿ ಕೋರಿದೆ.

ತಮ್ಮ ವಿಶ್ವಾಸಿ,

ನಿರ್ದೇಶಕರು,
ಮಕ್ಕಳ ರಕ್ಷಣಾ ನಿರ್ದೇಶನಾಲಯ,
ಬೆಂಗಳೂರು.

**<u>ಪ್ರತಿಯನ್ನು:-</u>**

1. ಎಲ್ಲಾ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಇವರಿಗೆ ಸೂಕ್ತ ಕ್ರಮವಹಿಸಲು.
2. ಅಧ್ಯಕ್ಷರು, ಬಾಲ ನ್ಯಾಯ ಮಂಡಳಿ, ಎಲ್ಲಾ ಜಿಲ್ಲೆಗಳು ಇವರಿಗೆ ಸೂಕ್ತ ಕ್ರಮವಹಿಸಲು.
3. ಅಧ್ಯಕ್ಷರು, ಮಕ್ಕಳ ಕಲ್ಯಾಣ ಸಮಿತಿ, ಎಲ್ಲಾ ಜಿಲ್ಲೆಗಳು ಇವರಿಗೆ ಸೂಕ್ತ ಕ್ರಮವಹಿಸಲು.
4. ಎಲ್ಲಾ ಮಕ್ಕಳ ಪಾಲನಾ ಸಂಸ್ಥೆಗಳ ಮುಖ್ಯಸ್ಥರು, ಇವರಿಗೆ ಸೂಕ್ತ ಕ್ರಮವಹಿಸಲು.